# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಕಂಪನಿಯ 8.25 ಮೆಗಾ ವ್ಯಾಟ್ ಪವನ ವಿದ್ಯುತ್ ಸಾಮರ್ಥ್ಯವನ್ನು 46.8 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವ ಬಗ್ಗೆ.

**ಓದಲಾಗಿದೆ:**
1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 210 ಎನ್‌ಸಿಇ 2005 ದಿನಾಂಕ: 20.8.2005.
2) ಸರ್ಕಾರಿ ಆದೇಶ ಸಂಖ್ಯೆ: ಇಎನ್ 463 ಎನ್‌ಸಿಇ 2006 ದಿನಾಂಕ: 22.12.2006.
3) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: KRED/08/VWTIPL-(8.25 MW to 46.8 MW)/2898 ದಿನಾಂಕ: 16/21.9.2011 ಮತ್ತು KRED/08/VWTIPL/2011/4381 ದಿನಾಂಕ: 11/23.11.2011.
4) ದಿನಾಂಕ 21.12.2011 ರಂದು ನಡೆದ ಹಂಚಿಕೆ ಸಮಿತಿ ನಡವಳಿ.

* * *

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಗೆ ಬಾಗಲಕೋಟೆ, ರಾಯಚೂರು, ಬೀದರ್, ಬಿಜಾಪುರ ಮತ್ತು ಗುಲ್ಬರ್ಗಾ ಜಿಲ್ಲೆಗಳಲ್ಲಿ 99.75 ಮೆ.ವ್ಯಾ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ:: ಎನ್.ಇ.ಜಿ. ಮೈಕಾನ್ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಕಂಪನಿಯ ಹೆಸರನ್ನು ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಎಂದು ಬದಲಾಯಿಸಿ ಯೋಜನೆಯನ್ನು ಅನುಷ್ಠಾನ ಮಾಡಲು ಅನುಮತಿ ನೀಡಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಕಂಪನಿಯವರಿಗೆ ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಹಂಚಿಕೆ ಮಾಡಿರುವ ಒಟ್ಟು ಸಾಮರ್ಥ್ಯದಲ್ಲಿ ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಮೈದಾರಡೊಕ್ಕಿ, ಅಮರಾಪುರ, ಹುನ್ನೂರು ಗ್ರಾಮಗಳಲ್ಲಿ ಮಂಜೂರಾಗಿರುವ 8.25 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 46.8 ಮೆಗಾ ವ್ಯಾಟ್ ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಮತ್ತು ಯೋಜನೆಯನ್ನು 2012-13ರಲ್ಲಿ ಅನುಷ್ಠಾನಗೊಳಿಸುವ, ವಿದ್ಯುತ್ ಖರೀದಿ ಒಪ್ಪಂದವನ್ನು ಎಸ್ಕಾಂನೊಂದಿಗೆ ಮಾಡಿಕೊಳ್ಳುವ ಷರತ್ತಿಗೊಳಪಟ್ಟು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ಸದರಿ ಜಮೀನು ಅರಣ್ಯ, ಕಂದಾಯ ಮತ್ತು ಖಾಸಗಿ ಪ್ರದೇಶಗಳಿಗೆ ಸೇರಿದ್ದಾಗಿರುತ್ತದೆ ಹಾಗೂ ಸದರಿ ಕಂಪನಿಗೆ ಮಂಜೂರಾಗಿರುವ 99.75 ಮೆ.ವ್ಯಾ ಸಾಮರ್ಥ್ಯ ಯೋಜನೆಯ ಕಾಲಾವಧಿಯು ಮುಗಿದಿದ್ದು ಸದರಿ ಯೋಜನೆಯನ್ನು ಅನುಷ್ಠಾನಮಾಡಲು 2012-13 ರವರೆಗೆ ಕಾಲಾವಕಾಶ ಬೇಕೆಂದು ಕೋರಿರುತ್ತಾರೆಂದು ಈ ಸಂಬಂಧ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ ಮತ್ತು ಸಾಮರ್ಥ್ಯ ಹೆಚ್ಚಳದ ಆದೇಶದ ನಂತರ ಅರಣ್ಯ ಮತ್ತು ಕಂದಾಯ ಇಲಾಖೆಯ ಅನುಮೋದನೆ ಪಡೆಯುವುದಾಗಿಯೂ, ಖಾಸಗೀ ಭೂಮಿಯನ್ನು ಸ್ವಾಧೀನಪಡಿಸುವಲ್ಲಿ ಕಾರ್ಯನಿರತರಾಗಿರುತ್ತಾರೆ ಎಂದು ತಿಳಿಸಿರುತ್ತಾರೆಂದು ವರದಿ ಮಾಡಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (4) ರ ಹಂಚಿಕೆ ಸಮಿತಿಯ ನಡವಳಿಯ ದಿನಾಂಕ :21.12.2011ರಂದು ನಡೆದ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. ಮೆ : ವೆಸ್ಟಾಸ್ ವಿಂಡ್ ಟೆಕ್ನಾಲಜಿಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರ ಪ್ರಸ್ತಾವಿತ ಸಾಮರ್ಥ್ಯ ಹೆಚ್ಚಳ ಪ್ರಸ್ತಾವನೆಯನ್ನು ಅರಣ್ಯ ಇಲಾಖೆಯ ಅನುಮೋದನೆ ಪಡೆದು ಅನುಷ್ಠಾನಗೊಳಿಸತಕ್ಕದ್ದೆಂದು ಷರತ್ತಿಗೊಳಪಟ್ಟು ಹೆಚ್ಚಿಸಲು ಹಂಚಿಕೆ ಸಮಿತಿಯು ಶಿಫಾರಸ್ಸಿಸಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ:-

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 389 ಎನ್‌ಸಿಇ 2011,**
**ಬೆಂಗಳೂರು, ದಿನಾಂಕ: 19.03.2012.**

ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಕೊಪ್ಪಳ ಜಿಲ್ಲೆಯ (ಹಿಂದೆ ರಾಯಚೂರು ಜಿಲ್ಲೆ) ಕುಷ್ಟಗಿ ತಾಲ್ಲೂಕು, ಮೈದೊರದಕ್ಕಿ, ಮುದಲ್ಗುಂಡಿ, ಜುಲ್ಕುಂಟೆ, ಕೋನಾಪುರ ಮತ್ತು ಆರ್ಯಭೋಗಾಪುರ ಗ್ರಾಮಗಳಲ್ಲಿ ಮಂಜೂರಾಗಿರುವ 8.25 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 46.8 ಮೆಗಾ ವ್ಯಾಟ್‌ಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿದೆ.

..........2)

| Geographical Area Details of the Project | Sanctioned capacity in MW | Enhancement Proposed in MW | No. of WTGs & rating in KW | Total Capacity including proposed enhancement in MW |
|---|---|---|---|---|
| The area identified for 8.25 MW is designated as part "A". It consists of several non-contiguous NW-SE oriented independent Ridge Peaks. The proposed area is covered in the following Geographical Co-ordinates:-<br>**Latitude**: 15°50'0"- 15°54'15" N<br>**Longitude**: 76°18'54"- 76°24'42" E<br>**Ridge peaks**: 648, 640, 635 & 625m AMSL.<br>Toposheet No: 57 A/5 | 8.25 MW | 38.55 MW | 26 Nos x 1800 KW | 46.8 MW |

1 ಮೆ:: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್, ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಮೆ :: ವೆಸ್ಟಾಸ್ ವಿಂಡ್ ಟೆಕ್ನಾಲಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ರವರು ವಿದ್ಯುತ್ ಖರೀದಿ ಒಪ್ಪಂದವನ್ನು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗ ಇವರೊಂದಿಗೆ ಮಾಡಿಕೊಳ್ಳತಕ್ಕದ್ದು.

3 ಈ ಯೋಜನೆಯನ್ನು ಪ್ರಾರಂಭಿಸುವ ಮುನ್ನ ಅರಣ್ಯ ಇಲಾಖೆಯ ಅನುಮೋದನೆ ಪಡೆಯತಕ್ಕದ್ದು.

4 ಸದರಿ ಯೋಜನೆಯನ್ನು 2012-2013ನೇ ಸಾಲಿನಲ್ಲಿ ಅನುಷ್ಠಾನಗೊಳಿಸತಕ್ಕದ್ದು. ಈ ಕುರಿತಂತೆ ಅಭಿವೃದ್ಧಿದಾರರಿಂದ ಕ್ರೆಡಲ್ ಒಪ್ಪಿಗೆ ಪತ್ರ ಪಡೆಯತಕ್ಕದ್ದು (committment letter)

5 ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

19/3/12
(ಕೌಸಲ್ಯಾ)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
19/3 ☎ 22034674.

**ಇವರಿಗೆ:**
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
3. ಉಪ ಅರಣ್ಯ ಸಂರಕ್ಷಣಾಧಿಕಾರಿ ಕೊಪ್ಪಳ ಜಿಲ್ಲೆ, ಕೊಪ್ಪಳ.

..........3)